ಹೋಬಳಿ	ಪ್ರಾರಂಭಿಕ ಇಳುವರಿ (ಕೆ.ಜಿ./ಹೆ.)	ವಾಸ್ತವಿಕ ಇಳುವರಿ (ಕೆ.ಜಿ./ಹೆ.)
ಕ್ಯಾಸೆಲ್ ರಾಕ್	1589	2196
ಕುಂಬಾರವಾಡ	1624	1904
ಸೂಪಾ (ಜೋಯಿಡಾ)	1763	2103

1016 ಶ್ರೀ ಸುನೀಲ್ ವಿ. ಹೆಗಡೆ ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಶಿರಸಿ ಕೆಡಿಸಿಸಿ ಬ್ಯಾಂಕಿನಲ್ಲಿ ನಡೆದಿರುವ ಅವ್ಯವಹಾರಗಳನ್ನು ತನಿಖೆ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ತನಿಖೆಗೆ ಆದೇಶಿಸುವುದೇ; ಯಾವ ರೀತಿಯ ತನಿಖೆಗೆ ಆದೇಶಿಸಲಾಗುವುದು;

ಇ) ಈಗಿರುವ ಕೆಡಿಸಿಸಿ ಬ್ಯಾಂಕ್ ಆಡಳಿತ ಮಂಡಳಿಯನ್ನು ವಿಸರ್ಜಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಈ ಆಡಳಿತ ಮಂಡಳಿಯನ್ನು ಎಂದಿನಿಂದ ವಿಸರ್ಜಿಸಲಾಗುವುದು;

ಉ) ವಿಸರ್ಜನೆಯಾದ ನಂತರ ಆಡಳಿತಾಧಿಕಾರಿಯನ್ನು ನೇಮಿಸ ಲಾಗುವುದೇ ಅಥವಾ ಚುನಾವಣೆ ನಡೆಸಲಾಗುವುದೇ? (ವಿವರ ನೀಡುವುದು)

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ ಸಚಿವರು)

ಅ,ಆ) ಉತ್ತರ ಕನ್ನಡ ಜಿಲ್ಲೆಯ ಕೆನರಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಶಿರಸಿ ಈ ಬ್ಯಾಂಕಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಬಗ್ಗೆ ಬೆಳಗಾವಿ ಪ್ರಾಂತದ ಸಹಕಾರ ಸಂಘಗಳ ಜಂಟಿ ನಿಬಂಧಕರು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64ರಡಿ ವಿಚಾರಣೆಯನ್ನು ದಿನಾಂಕ 15–1–2009ರಂದು ಆದೇಶಿಸಿ ನಿವೃತ್ತ ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಶ್ರೀ ಎಸ್.ಎಸ್. ಶಿಂತ್ರಿ ಅವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು ವಿಚಾರಣೆಯನ್ನು ದಿನಾಂಕ 31–8–2009ರೊಳಗೆ ಮುಕ್ತಾಯ ಗೊಳಿಸಲು ಅವಕಾಶ ನೀಡಲಾಗಿರುತ್ತದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ

1090 ಶ್ರೀ ಶಂಕರಪಾಟೀಲ ಮುನೇನಕೊಪ್ಪ (ನವಲಗುಂದ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋಧಿ, ಜೋಳ ಕಟಾವು ಮಾಡುವ ಯಂತ್ರಕ್ಕೆ (ಕೃಷಿ ಸಲಕರಣೆ) ಸಾರಿಗೆ ಇಲಾಖೆಯವರು ಪ್ರತಿ 3 ತಿಂಗಳಿಗೊಮ್ಮೆ ಕರ (ಟ್ಯಾಕ್ಸ್) ಆಕರಣೆ ಮಾಡುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೇರೆ ರಾಜ್ಯಗಳಲ್ಲಿಲ್ಲದ ಈ ಕರ ಆಕರಣ ಪದ್ಧತಿ ಕರ್ನಾಟಕ ರಾಜ್ಯದಲ್ಲಿ ಮಾತ್ರ ಆಚರಣೆಯಲ್ಲಿರುವ ಕಾರಣವೇನು;

ಇ) ಈ ಪದ್ಧತಿಯನ್ನು ರದ್ದು ಮಾಡಲಾಗುವುದೇ?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ತೆರಿಗೆ ವಿಧಿಸುವುದು ಮತ್ತು ವಿನಾಯಿತಿ ನೀಡುವುದು ಆಯಾ ರಾಜ್ಯಕ್ಕೆ ಸಂಬಂಧಿಸಿರುತ್ತದೆ.

ಇ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

1190 ಶ್ರೀ ರಹೀಮ ಖಾನ್ ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿಯೇ ಬೀದರ್ ಜಿಲ್ಲೆಯು ಅತಿ ಹಿಂದುಳಿದ ಜಿಲ್ಲೆಯಾಗಿದ್ದು, ಇದರ ಸರ್ವಾಂಗೀಣ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು;

ಆ) ಈ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾಲಯವು ಇಲ್ಲದೇ ಈ ಭಾಗದ ವಿದ್ಯಾರ್ಥಿಗಳಿಗೆ ತುಂಬಾ ಅನಾನುಕೂಲವಾಗಿದ್ದು, ವಿದ್ಯಾಭ್ಯಾಸ ಮಾಡಲು ಬೇರೆ ಜಿಲ್ಲೆಗೆ ಹೋಗಬೇಕಾದ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹೊಸದಾಗಿ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಿ ಈ ಜಿಲ್ಲೆಯ ವಿದ್ಯಾರ್ಥಿಗಳಿಗೆ ಎಂದಿನಿಂದ ಅನುಕೂಲ ಕಲ್ಪಿಸಲಾಗುವುದು?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು)